ಶ್ರೀ ಬಿ.ಬಿ.ಶಿವಪ್ಪ: ಮಾನ್ಯ ಅಧ್ಯಕ್ಷರೇ, ಮಾನ್ಯ ಸಚಿವರು ನನ್ನ ಕ್ಷೇತ್ರದಲ್ಲಿ ಪ್ರವಾಸದಲ್ಲಿದ್ದಾಗ ನಮ್ಮ ಪುರಸಭಾ ಕಚೇರಿಯನ್ನು ನೋಡಿ ಅದರ ನಿರ್ಮಾಣಕ್ಕಾಗಿ ನಾಲ್ಕು ಲಕ್ಷ ರೂಪಾಯಿಗಳನ್ನು ಕೊಡುತ್ತೇವೆ ಎಂದು ಹೇಳಿದ್ದರು. ಅದನ್ನು ಕೊಟ್ಟಿದ್ದಾರೆ. ಆ. ಹಣದಲ್ಲಿ ಅವ್ಯವಹಾರ ನಡೆದಿದೆಯೇ ಹಾಗೂ ಅದರ ಬಗ್ಗೆ ಸರಕಾರ ಗಮನಿಸಿದೆಯೇ? ಎಂದು ಕೇಳಿದ್ದಕ್ಕೆ ಗೊತ್ತಿಲ್ಲ ಎಂದು ಹೇಳಿದ್ದಾರೆ. ಸನ್ಮಾನ್ಯ ಮಂತ್ರಿಯವರಲ್ಲಿ ನನ್ನ ಅರಿಕೆ ಏನೆಂದರೆ, ಅಲ್ಲಿ ನಾಕಷ್ಟು ಅವ್ಯವಹಾರ ನಡೆದಿದೆ, ಅಲ್ಲಿ ನಡೆದ ಎಲ್ಲಾ ಅವ್ಯವಹಾರಗಳ ಬಗ್ಗೆ ತಾವುಗಳು ಈ ವಿಚಾರವೂ ಸೇರಿದಂತೆ ತನಿಖೆ ಮಾಡಲು ಕ್ರಮ ಜರುಗಿಸುವಿರಾ?

ಶ್ರೀ ಮಿರಾಜುದ್ದೀನ್ ಎನ್. ಪಟೇಲ್(ಪೌರಾಡಳಿತ ಸಚಿವರು): ಸನ್ಮಾನ್ಯ ಅಧ್ಯಕ್ಷರೇ, ಸಕಲೇಶಪುರ ಪುರಸಭಾ ಕಚೇರಿಯ ರಿಪೇರಿ ಸಲುವಾಗಿ ಮಾನ್ಯ ಸದಸ್ಯರು ಸ್ಪೆಶಲ್ ಗ್ರ್ಯಾಂಟ್ ಕೊಡಬೇಕೆಂದು ಮಾಡಿದ ಮನವಿಗೆ ನಾನು ನಾಲ್ಕು ಲಕ್ಷ ರೂಪಾಯಿಗಳನ್ನು ಮಂಜೂರು ಮಾಡಿದ್ದೆ. ಅದಕ್ಕೆ ಈಗ 5 ಲಕ್ಷದ 94 ಸಾವಿರ ರೂಪಾಯಿಗಳು ಖರ್ಚಾಗಿದೆ. ಅದಕ್ಕಾಗಿ ಮುನ್ಸಿಪಾಲಿಟಿಯಲ್ಲಿ ನಿರ್ಣಯವನ್ನು ಅಂಗೀಕರಿಸಿ, ಟೆಂಡರ್ ಕರೆದು ಕೆಲಸವನ್ನು ಮಾಡಿದ್ದಾರೆ. ಡಿಸಿಯವರ ವರದಿಯಲ್ಲಿ ಕೂಡ ಇದನ್ನು ನಮೂದು ಮಾಡಿದ್ದಾರೆ. ಮಾನ್ಯ ಸದಸ್ಯರು ಹೇಳುವ ಯಾವ ಅಲಿಗೇಶನ್ಸ್ ಕೂಡ ಸರಕಾರದ ಗಮನಕ್ಕೆ ಬಂದಿಲ್ಲ. ತಮ್ಮ ಹತ್ತಿರ ಅಧಿಕೃತ ದಾಖಲಾತಿಗಳು ಇದ್ದಲ್ಲಿ ಅದನ್ನು ನೋಡಿ ಸೂಕ್ತ ಕ್ರಮವನ್ನು ಜರುಗಿಸುತ್ತೇನೆ.

ಅಧ್ಯಕ್ಷರು: ಪ್ರಶ್ನೋತ್ತರ ವೇಳೆ ಮುಕ್ತಾಯವಾಯಿತು.

ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು.

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಅಧ್ಯಕ್ಷರೇ 22ನೇ ಪಟ್ಟಿಯಲ್ಲಿನ 40 ಪ್ರಶ್ನೆಗಳ ಪೈಕಿ 35 ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಸ್ವಯಂ ಉದ್ಯೋಗ ಯೋಜನೆ

1479(2092)

ಶ್ರೀ ಅಶೋಕ್ ಶಂಕರ ಕಾಟ್ವೆ (ಹುಬ್ಬಳ್ಳಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಹುಬ್ಬಳ್ಳಿ ನಗರದಲ್ಲಿ 1998-99 ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಸ್ವಯಂ ಉದ್ಯೋಗ ಯೋಜನೆ ಹಾಗೂ ನೇರ ಸಾಲ ಯೋಜನೆ ಅಡಿಯಲ್ಲಿ ಸಾಲ ಮಂಜೂರಾತಿ ಪಡೆದ ಫಲಾನುಭವಿಗಳ ಒಟ್ಟು ಸಂಖ್ಯೆ ಎಷ್ಟು?

ಆ) ಸಾಲ ಮಂಜೂರಾತಿ ನೀಡಿದ ಫಲಾನುಭವಿಗಳಿಗೆ ರಾಷ್ಟ್ರೀಕೃತ ಬ್ಯಾಂಕಿನ ಅಧಿಕಾರಿಗಳು ಸಾಲ ನೀಡುವ ಬಗ್ಗೆ ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಈಬಗ್ಗೆ ಸರ್ಕಾರದವರು ತೆಗೆದುಕೊಂಡ ಕ್ರಮಗಳೇನು?

ಶ್ರೀ ಕೆ.ಎಂ.ಕೃಷ್ಣರೆಡ್ಡಿ(ಸಮಾಜ ಕಲ್ಯಾಣ ಸಚಿವರು):

ಅ) 1998-99 ನೇ ಸಾಲಿನಲ್ಲಿ ಹುಬ್ಬಳ್ಳಿ ನಗರದಲ್ಲಿ ಸಾಲ ಮಂಜೂರಾತಿ ಪಡೆದ ಫಲಾನುಭವಿಗಳ ವಿವರ :

	ಪರಿಶಿಷ್ಟ ಜಾತಿ	ಪರಿಶಿಷ್ಟ ವರ್ಗ
ಸ್ವಯಂ ಉದ್ಯೋಗ ಯೋಜನೆ	108	09
ನೇರ ಸಾಲ ಯೋಜನೆ	02	-

ಆ) ಹೌದು.

ಇ) ಬ್ಯಾಂಕುಗಳು ಸಾಲ ಮಂಜೂರಾತಿಗೆ ವಿಳಂಬ ಧೋರಣೆ ಅನುಸರಿಸುತ್ತಿರುವ ಬಗ್ಗೆ ನಿರಂತರವಾಗಿ ಈ ವಿಷಯವನ್ನು ಸಿಂಡಿಕೇಟ್ ಬ್ಯಾಂಕ್ ನೇತೃತ್ವಲ್ಲಿನ ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿ ಸಭೆಯಲ್ಲಿ ಪ್ರಸ್ತಾಪಿಸಲಾಗಿದೆ. ಆದರೆ ಫಲಿತಾಂತ ತೃಪ್ತಿಕರವಾಗಿರುವುದಿಲ್ಲ. ಆದಾಗ್ಯೂ ವಿಷಯವನ್ನು ಭಾರತ ಸರ್ಕಾರದ ಹಣಕಾಸು ಇಲಾಖೆಯೊಂದಿಗೆ ವ್ಯವಹರಿಸಿ ರಾಜ್ಯದ ರಾಷ್ಟ್ರೀಕೃತ ಬ್ಯಾಂಕುಗಳಿಗೆ ಸೂಕ್ತ ಸೂಚನೆಗಳನ್ನು ನೀಡುವಂತೆ ಕೋರಲಾಗುವುದು.

ಹುಬ್ಬಳ್ಳಿ - ಧಾರವಾಡ ಮಹಾನಗರಕ್ಕೆ ನೀರು ಸರಬರಾಜು ಮಾಡುತ್ತಿರುವ ಮಲಪ್ರಭಾ ಮುಖ್ಯ ಕೊಳವೆ ಪೈಪುಗಳ ಬದಲಾವಣೆ ಕುರಿತು.

1479(2095)

ಶ್ರೀ ಅಶೋಕ ಶಂಕರ್ ಕಾಟ್ವೆ(ಹುಬ್ಬಳ್ಳಿ): ಮಾನ್ಯ ನಗರಾಭಿವೃದ್ಧಿ ಸಚಿವರು ಈ